JANUARY 29, 2026

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ತುಳು ಭಾ ೆಯನ್ನು ರಾಜ್ಯದ ಎರಡನೇ ಹೆಚ್ಚುವರಿ ಅಧಿಕೃತ ಭಾ ೆಯನ್ನಾಗಿ ಘೋ ಣೆ ಮಾಡಲು ಸಮಿತಿ ರಚನೆ. ವರದಿ ಆಧರಿಸಿ ಕ್ರಮ.

- ಮಕ್ಕಳ ಮೇಲಿನ ಲೈಂಗಿಕ ಮತ್ತು ದೈಹಿಕ ದೌರ್ಜನ್ಯ ತಡೆಗಟ್ಟಲು ಅಗತ್ಯ ಕ್ರಮ– ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಂದ ಮಾಹಿತಿ.

- ಜನರ ಜೀವನೋಪಾಯದ ನಿಟ್ಟಿನಲ್ಲಿ ಅರಣ್ಯ ಸಂರಕ್ಷಣೆಗೆ ಸರ್ಕಾರದ ನಿರ್ಧಾರ: ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಹೇಳಿಕೆ.

- ಇಂದಿನಿಂದ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ: ಮುಖ್ಯಮಂತ್ರಿ ಅವರಿಂದ ಚಾಲನೆ.

ಈಗ ವಾರ್ತೆಗಳ ವಿವರ

*******

ತುಳು ಭಾ ೆಯನ್ನು ರಾಜ್ಯದ ಎರಡನೇ ಹೆಚ್ಚುವರಿ ಅಧಿಕೃತ ಭಾ ೆಯನ್ನಾಗಿ ಘೋ ಣೆ ಮಾಡಲು ಸಮಿತಿ ರಚಿಸಿದ್ದು, ವರದಿ ನಂತರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ವಿಧಾನಸಭೆಯಲ್ಲಿ ಪುತ್ತೂರು ಕ್ಷೇತ್ರದ ಸದಸ್ಯ ಅಶೋಕ್ ಕುಮಾರ್ ರೈ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಆಂಧ್ರಪ್ರದೇಶದಲ್ಲಿ ಉರ್ದು ಭಾ ೆಯನ್ನು ಎರಡನೇ ಅಧಿಕೃತ ಭಾ ೆಯಾಗಿ ಘೋಷಿಸಲು ಅನುಸರಿಸಿರುವ ಮಾನದಂಡಗಳ ಕುರಿತು ಪರಿಶೀಲಿಸಲು ಸಮಿತಿ ಆಂಧ್ರಪ್ರದೇಶಕ್ಕೆ ಭೇಟಿ ನೀಡಿದ್ದು, ವರದಿ ಸಲ್ಲಿಸಬೇಕಿದೆ. ವರದಿ ನೀಡಿದ ನಂತರ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ಸಭೆ ಕರೆದು ಚರ್ಚಿಸಿ, ನಿರ್ಣಯ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

*******

ಶಿಕ್ಷಣ ಸಂಸ್ಥೆಗಳು ಮತ್ತು ವಿದ್ಯಾರ್ಥಿ ನಿಲಯಗಳಲ್ಲಿ ಮಕ್ಕಳ ಮೇಲೆ ಲೈಂಗಿಕ ಮತ್ತು ದೈಹಿಕ ದೌರ್ಜನ್ಯ ತಡೆಗಟ್ಟಲು ಸರ್ಕಾರವು ಅಗತ್ಯ ಕ್ರಮಗಳನ್ನು ಕೈಗೊಂಡಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿ ಮಂಗಳೂರು ನಗರ ಉತ್ತರ ಕ್ಷೇತ್ರದ ಸದಸ್ಯ ಡಾ.ಭರತ್ ಶೆಟ್ಟಿ ಇವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಮಕ್ಕಳ ಸಹಾಯವಾಣಿ 1098 ಮಕ್ಕಳ ಸುರಕ್ಷತೆಗಾಗಿ ಕಾರ್ಯನಿರ್ವಹಿಸುತ್ತಿದೆ. ಸಂಕ ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗುತ್ತಾರೆ. ಈ ಕುರಿತು ವ್ಯಾಪಕ ಪ್ರಚಾರ ಕಾರ್ಯಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಕೈಗೊಳ್ಳುತ್ತಿದ್ದೇವೆ ಎಂದರು. ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ತಕ್ಷಣಕ್ಕೆ ನೆರವಾಗಲು ಇಲಾಖೆಯಿಂದ "ಅಕ್ಕಪಡೆ" ರಚಿಸಿ ಕಾರ್ಯರೂಪಕ್ಕೆ ತರಲಾಗಿದೆ. ಪೋಕ್ಸೋ ಕಾಯ್ದೆಯಡಿ ಸಂತ್ರಸ್ಥರಿಗೆ ನೆರವಾಗಲು ಎನ್‌ಸಿಪಿಸಿಆರ್ ಮಾರ್ಗಸೂಚಿಯನ್ವಯ ರಾಜ್ಯಾದ್ಯಂತ 161 ಬೆಂಬಲ ವ್ಯಕ್ತಿಗಳನ್ನು ನೇಮಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

*******

ವನ್ಯಜೀವಿ ಸಂರಕ್ಷಣೆ, ಅರಣ್ಯ ಸಂಪತ್ತು ರಕ್ಷಣೆ ಮತ್ತು ಜನರ ಅಭಿವೃದ್ಧಿಯ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಅಗತ್ಯ ತೀರ್ಮಾನಗಳನ್ನು ಕೈಗೊಳ್ಳುತ್ತಿದೆ ಎಂದು ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಶಿವಮೊಗ್ಗ ಜಿಲ್ಲೆ ತ್ಯಾವರೆಕೊಪ್ಪ ಸಿಂಹಧಾಮದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೆಟ್ಟಿಹಳ್ಳಿ ವನ್ಯಜೀವಿ ಧಾಮ ಕುರಿತ ಡಿ–ನೋಟಿಫಿಕೇ ್ನ್ ಪ್ರಸ್ತಾವನೆ ಸುಮಾರು 2016 ರಿಂದ ಬಾಕಿ ಇದ್ದು, ಈಗ ಅಂತಿಮ ಘಟ್ಟ ತಲುಪಿದೆ. ಎಂದರು. ಅರಣ್ಯ ಸಂಪತ್ತು ಸಂರಕ್ಷಣೆ ಮಾಡಬೇಕು. ಜೀವನ ಮತ್ತು ಜೀವನೋಪಾಯ ಎರಡೂ ಅಗತ್ಯ ಸಂಗತಿಗಳಾಗಿದ್ದು, ಆಡಳಿತಾತ್ಮಕವಾಗಿ, ಭಾವನಾತ್ಮಕವಾಗಿ ತೀರ್ಮಾನ ತೆಗೆದುಕೊಳ್ಳಲು ಖುದ್ದಾಗಿ ಪರಿಶೀಲನೆ ನಡೆಸಿದ್ದೇನೆ ಎಂದು ಸಚಿವರು ಹೇಳಿದರು.

*******

ಸರ್ಕಾರಿ ಆಸ್ಪತ್ರೆಗಳ ರೋಗಿಗಳಿಗೆ ಪೌಷ್ಟಿಕ ಹಾಗೂ ಗುಣಮಟ್ಟದ ಆಹಾರ ಪೂರೈಕೆ ಸರ್ಕಾರದ ಆದ್ಯತೆ ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. 'ಸಶಕ್ತ ಮತ್ತು ಆರೋಗ್ಯವಂತ ಕರ್ನಾಟಕ' ನಿರ್ಮಾಣದ ನಿಟ್ಟಿನಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮತ್ತೊಂದು ಮಹತ್ವದ ಹೆಜ್ಜೆ ಇರಿಸಿದ್ದು, ರಾಜ್ಯದ ಪ್ರಮುಖ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಅತ್ಯುತ್ತಮ ದರ್ಜೆಯ ಆಹಾರವನ್ನು ಒದಗಿಸುವ ಉದ್ದೇಶದಿಂದ ಇಸ್ಕಾನ್ ಸಂಸ್ಥೆಯ ಮೂಲಕ ಪೌಷ್ಟಿಕ ಆಹಾರ ಪೂರೈಸಲು ಅಧಿಕೃತ ಆದೇಶ ಹೊರಡಿಸಲಾಗಿದೆ ಎಂದು ತಿಳಿಸಿದ್ದಾರೆ. ಮಂಗಳೂರಿನ ವೆನ್ಲಾಕ್ ಜಿಲ್ಲಾ ಆಸ್ಪತ್ರೆ, ಧಾರವಾಡ ಜಿಲ್ಲಾ ಆಸ್ಪತ್ರೆ ಹಾಗೂ ಬೆಂಗಳೂರಿನ ಯಲಹಂಕ, ಕೆ.ಆರ್. ಪುರ ಮತ್ತು ನೆಲಮಂಗಲ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಈ ಸುಧಾರಿತ ಆಹಾರ ಪದ್ಧತಿಯನ್ನು ಜಾರಿಗೆ ತರಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

*******

ಬಾಗಲಕೋಟೆ ಜಿಲ್ಲೆಯ ಬಾದಾಮಿ, ಪಟ್ಟದಕಲ್ಲು ಹಾಗೂ ಐಹೊಳೆ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಗೆ ವಿಸ್ತೃತ ಯೋಜನಾ ವರದಿ–ಡಿಪಿಆರ್ ಸಿದ್ಧಪಡಿಸುವಂತೆ ಸಂಸದ ಪಿ.ಸಿ.ಗದ್ದಿಗೌಡರ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿ ಯೋಜನೆಗಳ ಕುರಿತು ಜಿಲ್ಲಾಧಿಕಾರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ ಜಿಲ್ಲೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಅಂದಾಜು 200 ಕೋಟಿ ರೂಪಾಯಿಗಳ ಸಮಗ್ರ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಬೇಕಿದೆ ಎಂದರು. ಬಾದಾಮಿಯ ಎಪಿಎಂಸಿ ಜಮೀನಿನಲ್ಲಿ ಪಾರ್ಕಿಂಗ್ ಪ್ಲಾಜಾ ನಿರ್ಮಾಣ, ಅಲ್ಲಿಂದ ಗುಹಾಂತರ ದೇವಾಲಯಕ್ಕೆ ಹೋಗಲು ಸಂಪರ್ಕ ರಸ್ತೆ ನಿರ್ಮಾಣದ ಯೋಜನೆ, ಪ್ರವಾಸಿಗರಿಗೆ ಶೌಚಾಲಯ ಸೇರಿದಂತೆ ಇತರೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕಾರ್ಯಗಳನ್ನು ಡಿಪಿಆರ್ ನಲ್ಲಿ ಸೇರ್ಪಡೆಗೊಳಿಸಿಕೊಳ್ಳಬೇಕು ಎಂದು ಅವರು ಹೇಳಿದರು.

*******

ಯುಪಿಎ ಆಡಳಿತಾವಧಿಯಮನ್ರೇಗಾ ಯೋಜನೆಯ ವೈಫಲ್ಯಗಳನ್ನು ಸರಿಪಡಿಸಿ, 2047 ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾ ್ಟ್ರವನ್ನಾಗಿ ಮಾಡಲು ಎನ್‌ಡಿಎ ಸರ್ಕಾರ ಕ್ರಾಂತಿಕಾರಿ 'ವಿಬಿ–ಜಿ ರಾಮ್ ಜಿ' ಕಾಯ್ದೆ ಜಾರಿಗೆ ತಂದಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದ್ದಾರೆ. ವಿಜಯಪುರದಲ್ಲಿ ಆಯೋಜಿಸಿದ್ದ 'ವಿಬಿ–ಜಿ ರಾಮ್ ಜಿ' ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಈ ಕಾಯ್ದೆಯಡಿ ಉದ್ಯೋಗ ಖಾತರಿಯನ್ನು 100 ದಿನಗಳಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ಬಿತ್ತನೆ ಮತ್ತು ಕಟಾವು ಸಂದರ್ಭದಲ್ಲಿ ರೈತರಿಗೆ ಕೃಷಿ ಕಾರ್ಮಿಕರ ಕೊರತೆಯಾಗದಂತೆ, ಯೋಜನೆಯ ಕೆಲಸಗಳನ್ನು 60 ದಿನಗಳ ಕಾಲ ಸ್ಥಗಿತಗೊಳಿಸುವ ಅಧಿಕಾರವನ್ನು ರಾಜ್ಯಗಳಿಗೆ ನೀಡಲಾಗಿದೆ. ನಕಲಿ ಉದ್ಯೋಗ ಸೃಷ್ಟಿ ತಡೆಯಲು ಬಯೋಮೆಟ್ರಿಕ್ ಹಾಜರಾತಿ ಮತ್ತು ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಅಳವಡಿಸಲಾಗಿದೆ ಎಂದು ಅವರು ಹೇಳಿದರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

37 ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಅಂಗವಾಗಿ, ರಾಜ್ಯಾದ್ಯಂತ ಈ ತಿಂಗಳ 31 ರ ವರೆಗೆ ರಸ್ತೆ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ರಸ್ತೆ ನಿಯಮಗಳ ಪಾಲನೆ ಜೊತೆ, ಇಲಾಖೆಯ ಕಾರ್ಯವೈಖರಿಯ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡ ಪೂರ್ವ, ಹುಬ್ಬಳ್ಳಿ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿ ಶ್ರೀಕಾಂತ ಬಡಿಗೇರ ಅವರು..

ಧ್ವನಿ–ಶ್ರೀಕಾಂತ ಬಡಿಗೇರ–33 ಸೆಕೆಂಡ್ಸ್

*******

ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ 17 ನೇ ಅವತರಣಿಕೆಗೆ ಅಗತ್ಯ ಸಿದ್ಧತೆಗಳು ಪೂರ್ಣಗೊಂಡಿದ್ದು, ಇಂದು ಸಂಜೆ 5 ಗಂಟೆಗೆ ವಿಧಾನಸೌಧದ ಮುಂಭಾಗ ಮುಖ್ಯಮಂತ್ರಿ ಸಿದ್ದರಾಮಯ್ಯ ಚಿತ್ರೋತ್ಸವಕ್ಕೆ ಚಾಲನೆ ನೀಡಲಿದ್ದಾರೆ. ರಾತ್ರಿ 8ಕ್ಕೆ ಚಿತ್ರೋತ್ಸವದ ಉದ್ಘಾಟನಾ ವೇದಿಕೆಯಲ್ಲಿ ನೆದರ್‌ಲ್ಯಾಂಡ್ ದೇಶದ 'ಪೋರ್ಟ್ ಬ್ಯಾಗೇಜ್' ಚಿತ್ರವು ಉದ್ಘಾಟನಾ ಚಿತ್ರವಾಗಿ ಪ್ರದರ್ಶನವಾಗಲಿದೆ. ಜನವರಿ 30 ರಿಂದ ಫೆಬ್ರವರಿ 6ರವರೆಗೆ 65 ದೇಶಗಳ ಸುಮಾರು 225 ಅತ್ಯುತ್ತಮ ಚಲನಚಿತ್ರಗಳು ಪ್ರದರ್ಶನಗೊಳ್ಳಲಿದ್ದು, ವಿಶ್ವದ ಪ್ರತಿಷ್ಠಿತ ಚಲನಚಿತ್ರೋತ್ಸವಗಳಲ್ಲಿ ಪಾಲ್ಗೊಂಡಿದ್ದ ಅತ್ಯುತ್ತಮ ಚಲನಚಿತ್ರಗಳು ಈ ಚಿತ್ರೋತ್ಸವದಲ್ಲಿ 'ಬೆಂಗಳೂರಿನಲ್ಲಿ ಜಗತ್ತು' ಎನ್ನುವ ಶೀರ್ಷಿಕೆಯಡಿ ಪ್ರದರ್ಶನಗೊಳ್ಳಲಿವೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನ ಪರಿ ತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಪಾಲ್ಗೊಳ್ಳಲಿದ್ದು, ಚಿತ್ರೋತ್ಸವದ ರಾಯಭಾರಿ ಬಹುಭಾ ಾ ನಟ ಪ್ರಕಾಶ್ ರಾಜ್ ಮತ್ತು ನಟಿ ರುಕ್ಮಿಣಿ ವಸಂತ್ ವಿಶೇ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ ಉಪಸ್ಥಿತರಿರಲಿದ್ದಾರೆ.

*******

ಪರಿಸರ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವುದು ಅಗತ್ಯ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿದ್ದಾರೆ. ಸ್ವಚ್ಛ ಭಾರತ್ ಮಿ ನ್ 2 ನೇ ಹಂತದ ಯೋಜನೆಯಡಿ, ಸ್ವಚ್ಛ ಸರ್ವೇಕ್ಷಣ ಅಭಿಯಾನ ಕುರಿತ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ನಗರ ಮತ್ತು ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

*******

ಕೆಎಸ್‌ಆರ್‌ಟಿಸಿ ಸ್ಟಾಫ್ ವರ್ಕರ್ಸ್ ಫೆಡರೇಶನ್ ಅಧ್ಯಕ್ಷರಾಗಿದ್ದ ಹಿರಿಯ ಕಾರ್ಮಿಕ ಮುಖಂಡ ಎಚ್.ವಿ ಅನಂತ ಸುಬ್ಬರಾವ್ ನಿನ್ನೆ ಬೆಂಗಳೂರಿನಲ್ಲಿ ನಿಧನರಾದರು. ಅವರಿಗೆ 82 ವರ್ಷ ವಯಸ್ಸಾಗಿತ್ತು. ಸುಧೀರ್ಘ ನಾಲ್ಕು ದಶಕಗಳ ಕಾಲ ಕಾರ್ಮಿಕ ಮುಖಂಡರಾಗಿ ಅನೇಕ ಚಳುವಳಿ, ಹೋರಾಟಗಳನ್ನು ಸಂಘಟಿಸಿದ್ದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ತುಳು ಭಾ ೆಯನ್ನು ರಾಜ್ಯದ ಎರಡನೇ ಹೆಚ್ಚುವರಿ ಅಧಿಕೃತ ಭಾ ೆಯನ್ನಾಗಿ ಘೋ ಣೆ ಮಾಡಲು ಸಮಿತಿ ರಚನೆ. ವರದಿ ಆಧರಿಸಿ ಕ್ರಮ.

ಮಕ್ಕಳ ಮೇಲಿನ ಲೈಂಗಿಕ ಮತ್ತು ದೈಹಿಕ ದೌರ್ಜನ್ಯ ತಡೆಗಟ್ಟಲು ಅಗತ್ಯ ಕ್ರಮ– ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಂದ ಮಾಹಿತಿ.

ಜನರ ಜೀವನೋಪಾಯದ ನಿಟ್ಟಿನಲ್ಲಿ ಅರಣ್ಯ ಸಂರಕ್ಷಣೆಗೆ ಸರ್ಕಾರದ ನಿರ್ಧಾರ: ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆ ಹೇಳಿಕೆ.

ಇಂದಿನಿಂದ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ: ಮುಖ್ಯಮಂತ್ರಿ ಅವರಿಂದ ಚಾಲನೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********